ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 24 –6–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br>ಡಿ. ಹೆಚ್. ಶಂಕರಮೂರ್ತಿ,<br>ಸಭಾಪತಿಗಳು,<br>ಕರ್ನಾಟಕ ವಿಧಾನ ಪರಿಷತ್,<br>ಬೆಂಗಳೂರು. | 25-6-2015<br>ಗುರುವಾರ<br>ಬೆಳಿಗ್ಗೆ<br>11–30 ಗಂಟೆಗೆ | ಕೊಠಡಿ ಸಂಖ್ಯೆ 117, ಸಭಾಪತಿಯವರ ಕೊಠಡಿ, ಮೊದಲ ಮಹಡಿ, ವಿಧಾನಸೌಧ, ಬೆಂಗಳೂರು. |
| 2. | ಪತ್ರಿಕಾಗೋಷ್ಠಿ:<br>ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು, | 25-6-2015<br>ಗುರುವಾರ<br>ಮಧ್ಯಾಹ್ನ<br>1–00 ಗಂಟೆಗೆ | ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣ, ಮೂರನೇ ಮಹಡಿ, ವಿಧಾನಸೌಧ, ಬೆಂಗಳೂರು. |
| 3. | ಪತ್ರಿಕಾಗೋಷ್ಠಿ:<br>ಕೆ. ಅಭಯ್‌ಚಂದ್ರ<br>ಯುವಜನ ಸೇವೆ ಮತ್ತು ಮೀನುಗಾರಿಕೆ ಸಚಿವರು | 25-6-2015<br>ಗುರುವಾರ<br>ಮಧ್ಯಾಹ್ನ<br>3–00 ಗಂಟೆಗೆ | ಸಮ್ಮೇಳನ ಸಭಾಂಗಣ, 2ನೇ ಮಹಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು – 560 001 |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಉಚ್ಚನ್ಯಾಯಾಲಯದಲ್ಲಿ ನೂತನ ಕಾನೂನು ಸಾಕ್ಷರತಾ ಮೊಬೈಲ್ ವಾಹನ ಉದ್ಘಾಟನೆ

ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ವತಿಯಿಂದ ಹೊಸ ಕಾನೂನು ಸಾಕ್ಷರತಾ ಮೊಬೈಲ್ ವಾಹನವನ್ನು ರಾಜ್ಯ ಉಚ್ಚನ್ಯಾಯಾಲಯದ ನ್ಯಾಯಮೂರ್ತಿಗಳಾದ ನ್ಯಾ: ಸುಬ್ರೋ ಕಮಲ್ ಮುಖರ್ಜಿ ಉಚ್ಚ ನ್ಯಾಯಾಲಯದಲ್ಲಿ ಇಂದು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಉಚ್ಚನ್ಯಾಯಾಲದ ನ್ಯಾಯಾಧೀಶರಾದ ಎನ್. ಕೆ. ಪಾಟೀಲ್, ನ್ಯಾಯಮೂರ್ತಿ ರಾಮ್‌ಮೋಹನ್ ರೆಡ್ಡಿ, ನ್ಯಾಯಮೂರ್ತಿ ಎಲ್. ನಾರಾಯಣಸ್ವಾಮಿ ಸಹ ಹಾಜರಿದ್ದರು.

ನಂತರ ಈ ಕುರಿತು ಮಾತನಾಡಿದ ಉಚ್ಚನ್ಯಾಯಾಲಯದ ನ್ಯಾಯಾಧೀಶರಾದ ಎನ್. ಕೆ. ಪಾಟೀಲ್ ಈಗಾಗಲೇ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ 3 ಸಂಚಾರಿ ವಾಹನಗಳನ್ನು ಹೊಂದಿದ್ದು, ಇದೀಗ 4 ನೇ ವಾಹನ ಉದ್ಘಾಟನೆಗೊಂಡಿದೆ. ಕಾನೂನು ಸಾಕ್ಷರತಾ ರಥವಾದ ಮೊಬೈಲ್ ಸಂಚಾರಿ ವಾಹನ ಎಲ್ಲಾ ಜಿಲ್ಲೆಗಳಲ್ಲಿನ ಪ್ರತಿ ತಾಲ್ಲೂಕು, ಹಳ್ಳಿಗಳಲ್ಲಿ ಸಂಚರಿಸುತ್ತವೆ. ಇದರಲ್ಲಿ ಜನರಿಗೆ ಕಾನೂನು ಅರಿವು ಕಾರ್ಯಕ್ರಮ ಉಪನ್ಯಾಸಗಳು, ಸಾಕ್ಷ್ಯಚಿತ್ರ ಪ್ರದರ್ಶನ ಮುಂತಾದವುಗಳನ್ನು ಏರ್ಪಡಿಸಲಾಗುವುದು. ಈ ವಾಹನದಲ್ಲಿ ವಿದ್ಯುಚ್ಛಕ್ತಿ ಇರುವುದರಿಂದ ಸಂಜೆಯ ವೇಳೆಯಲ್ಲಿ ಗ್ರಾಮಗಳಲ್ಲಿ ನಡೆಯುವ ಗ್ರಾಮಸಭಾದಲ್ಲಿ ಸಹ ಈ ಕಾನೂನು ಅರಿವು ಕಾರ್ಯಕ್ರಮಗಳ ಮೂಲಕ ಜನರಿಗೆ ತಿಳುವಳಿಕೆ ನೀಡಲಾಗುವುದು. ಅಲ್ಲದೆ ಉಚ್ಚನ್ಯಾಯಾಲಯದಿಂದ ಮಾಸಿಕ ಲೋಕ್‌ಅದಾಲತ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಜನರ ವ್ಯಾಜ್ಯಗಳನ್ನು ನ್ಯಾಯಾಲಯ ತ್ವರಿತ ಗತಿಯಲ್ಲಿ ಪರಿಹರಿಸುತ್ತವೆ ಎಂದರು.

ಪಲ್ಲವಿ/ಕವನ/ಕೆಎಂ

## ಮಹಿಳೆಯರಿಗೆ ಬಡ್ಡಿ ರಹಿತ 2 ಲಕ್ಷ ರೂ. ಸಾಲ

ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)

ಪ್ರಸಕ್ತ 2015-16 ನೇ ಆರ್ಥಿಕ ವರ್ಷದಿಂದ ಮಹಿಳಾ ಅಭಿವೃದ್ಧಿ ನಿಗಮವತಿಯಿಂದ ಮಹಿಳೆಯರಿಗೆ ನೀಡಲಾಗುತ್ತಿದ್ದ 1 ಲಕ್ಷ ರೂ. ಸಾಲವನ್ನು 2 ಲಕ್ಷ ರೂ.ಗೆ ಹೆಚ್ಚಿಸುವ ಜೊತೆಗೆ ಬಡ್ಡಿರಹಿತ ಸಾಲವನ್ನು ನೀಡಲಾಗುವುದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಬೆಂಗಳೂರು ನಗರ ಸ್ತ್ರೀ ಶಕ್ತಿ ಗುಂಪುಗಳ ಸಮಾವೇಶದಲ್ಲಿ ಸಂಘಗಳಿಗೆ 5,000 ರೂ.ಗಳ ಸುತ್ತು ನಿಧಿಯನ್ನು ವಿತರಿಸಿ ಮಾತನಾಡಿದ ಅವರು ಮಹಿಳೆಯರಿಗೆ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಶಕ್ತಿ ನೀಡಿ ಅವರನ್ನು ಸಬಲಗೊಳಿಸಬೇಕೆಂಬ ಉದ್ದೇಶದಿಂದ ನಮ್ಮ ಸರ್ಕಾರವು ಸುತ್ತು ನಿಧಿಯನ್ನು 25 ಸಾವಿರ ರೂ.ಗಳಿಗೆ ಹೆಚ್ಚಿಸಲು ತೀರ್ಮಾನಿಸಿರುವುದರಿಂದ ಪ್ರತಿವರ್ಷ 5 ಸಾವಿರ ರೂ.ನಂತೆ ಸುತ್ತು ನಿಧಿಯನ್ನು ನೀಡಲಾಗುತ್ತಿದೆ ಎಂದರು.

ಇಂದು 500 ಮಹಿಳಾ ಸಂಘಗಳಿಗೆ 5 ಸಾವಿರ ರೂ.ನಂತೆ 25 ಲಕ್ಷ ರೂ.ಗಳನ್ನು ವಿತರಣೆ ಮಾಡಲಾಗುತ್ತಿದೆ. ಮಹಿಳೆಯರಿಲ್ಲಿ ಉಳಿತಾಯ ಮಾಡುವಂತಹ ಜಾಗೃತಿ ಬರಬೇಕು. ಮಹಿಳೆಯರು ಸಾಲವನ್ನು ಪ್ರಾಮಾಣಿಕವಾಗಿ ಮರುಪಾವತಿ ಮಾಡುತ್ತಾರೆ. ಉಳಿತಾಯ ಮಾಡಿದ ಹಣದಿಂದಲೇ ಬೇರೆ ಬೇರೆ ಆರ್ಥಿಕ ಚಟುವಟಿಕೆಗಳನ್ನು ಮಾಡಲು ಅನುಕೂಲವಾಗುತ್ತದೆ. ನಮ್ಮ ಸರ್ಕಾರವು ಮಹಿಳಾ ಅಭಿವೃದ್ಧಿ ನಿಗಮದಿಂದ ಪಡೆದಿರುವ ಸಾಲವನ್ನು ಮನ್ನಾ ಮಾಡಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ನಮ್ಮ ರಾಜ್ಯದಲ್ಲಿ 3 ಕೋಟಿ ರೂ. ಹೆಚ್ಚು ಹೆಣ್ಣು ಮಕ್ಕಳಿದ್ದು ಪುರುಷರಷ್ಟೇ ಸಮಾನಹಕ್ಕು ಮಹಿಳೆಯರಿಗೂ ಸಿಗಬೇಕೆಂಬ ಉದ್ದೇಶದಿಂದ ನಮ್ಮ ಸರ್ಕಾರವು ಮಹಿಳೆಯರಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಲುವಾಗಿ ಬಜೆಟ್‍ನಲ್ಲಿ  ಮಹಿಳಾ ಮತ್ತು ಮಕ್ಕಳ ಇಲಾಖೆಗೆ ಹೆಚ್ಚಿನ ಅನುದಾನವನ್ನು ಕಾಯ್ದಿರಿಸಿದೆ.  ಹಿಂದೆ ಮಹಿಳಾ ಮತ್ತು ಮಕ್ಕಳ ಸಚಿವರಾಗಿದ್ದ ಮೋಟಮ್ಮನವರು ಸ್ತ್ರೀಶಕ್ತಿ ಸಂಘಗಳನ್ನು ಹುಟ್ಟುಹಾಕಿದರು.  ಇಂದು ನಮ್ಮ ರಾಜ್ಯದಲ್ಲಿ ಒಂದುವರೆ ಲಕ್ಷ ಸ್ತ್ರೀ ಸಂಘಗಳಿದ್ದು ಅಂದಾಜು 20 ಲಕ್ಷಕ್ಕೂ ಹೆಚ್ಚು ಮಹಿಳೆಯರು  ಸಂಘದ ಸದಸ್ಯರಾಗಿದ್ದಾರೆ.

ದೇವದಾಸಿಯರಿಗೆ ನೀಡಲಾಗುತ್ತಿದ್ದ ಮಾಸಾಶಸನವನ್ನು 500 ರೂ.ಗಳಿಂದ 1000 ರೂ.ಗೆ ಹೆಚ್ಚಿಸಲಾಗಿದೆಯಲ್ಲದೆ ಅವರಿಗೆ ಮನೆ ನಿರ್ಮಾಣಕ್ಕಾಗಿ ಒಂದುವರೆ ಲಕ್ಷ ರೂ. ಅನುದಾನವನ್ನು ನೀಡಲಾಗುತ್ತಿದೆ. ದೌರ್ಜನ್ಯಕ್ಕೊಳಪಟ್ಟ ಮಹಿಳೆಯರಿಗೆ ಉಚಿತ ವೈದ್ಯಕೀಯ ನೆರವಿನ ಜೊತೆಗೆ ಉಚಿತ ಕಾನೂನು ಸೌಲಭ್ಯ ಮತ್ತು ಸಾಂತ್ವನ ನೀಡುವ ಸಲುವಾಗಿ ಪ್ರತಿ ಜಿಲ್ಲಾ ಆಸ್ಪತ್ರೆಗಳಲ್ಲಿ ಪ್ರತ್ಯೇಕ ಘಟಕಗಳನ್ನು ತೆರೆಯಲಾಗಿದೆ.  ಅಲ್ಲದೆ ಆಸಿಡ್ ದಾಳಿಗೆ ಒಳಗಾದ ಮಹಿಳೆಯರ ಸಹಾಯಕ್ಕಾಗಿ 5 ಕೋಟಿ ರೂ.ಗಳನ್ನು ಕಾಯ್ದಿರಿಸಲಾಗಿದೆ ಎಂದು ಸಿದ್ದರಾಮಯ್ಯನವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಉಮಾಶ್ರೀ ನಗರ ಸ್ತ್ರೀ ಶಕ್ತಿ ಗುಂಪುಗಳಿಗೆ ಸುತ್ತು ನಿಧಿ ಚೆಕ್ ವಿತರಿಸಿದರು.  ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮಹಿಳಾ ಸಾಗಾಣಿಕೆ ಕುರಿತು ಕರಪತ್ರ ಮತ್ತು ಭಿತ್ತಿಪತ್ರ ಬಿಡುಗಡೆ ಮಾಡಿದರು.  ಮೂಲ ಸೌಲಭ್ಯ ಅಭಿವೃದ್ಧಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವ ಆರ್. ರೋಷನ್‍ಬೇಗ್ ಅಧ್ಯಕ್ಷತೆ ವಹಿಸಿದ್ದರು.
ಪಲ್ಲವಿ/ಪೂರ್ಣಿಮ/ಕೆಎಂ

## ವರ್ಗಾವಣೆ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ ನಿರ್ದೇಶಕ ಜಿ.ವಿ. ಶ್ರೀನಿವಾಸಮೂರ್ತಿ ಅವರನ್ನು ಕರ್ನಾಟಕ ರಾಜ್ಯ ಜವಳಿ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ಹಾಗೂ ಎಸ್. ಮುದ್ದಯ್ಯ ಅವರನ್ನು ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳಿಯ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ವರ್ಗಾಯಿಸಲಾಗಿದೆ.

ಪಲ್ಲವಿ/ಬಾಬು:ಜಿಪಿಆರ್.

## ಬಿ.ಎಂ.ಟಿ.ಸಿ.ಗೆ ಅಧಿಕಾರಿಯುತ ನಿರ್ದೇಶಕರ ನೇಮಕ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಮಂಡಳಿಯ ಅಧಿಕಾರಿಯುತ ನಿರ್ದೇಶಕರನ್ನಾಗಿ ಆರ್ಥಿಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ರಿತೇಶ್‌ಕುಮಾರ್ ಸಿಂಗ್ ಹಾಗೂ ಬಿ.ಎಂ.ಟಿ.ಸಿ. ಸಂಸ್ಥೆಯ ನಿರ್ದೇಶಕರನ್ನಾಗಿ ಬಿಸ್ವಜಿತ್ ಮಿಶ್ರಾ ಅವರನ್ನು ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ.

ಪಲ್ಲವಿ/ಬಾಬು:ಜಿಪಿಆರ್.

## ವಾರ್ತಾ ವಿಶೇಷ

# ಮೈಸೂರಿನಲ್ಲಿ ಜೂನ್ 27 ರಂದು ಫಲಾನುಭವಿಗಳೊಂದಿಗೆ ಮುಖ್ಯಮಂತ್ರಿಗಳ ನೇರ ಸಂವಾದ

ರಾಜ್ಯ ಸರ್ಕಾರ ಕಳೆದ ಎರಡು ವರ್ಷಗಳಿಂದ ಅನುಷ್ಠಾನಕ್ಕೆ ತಂದಿರುವ ವಿವಿಧ ಯೋಜನೆಗಳ ಬಗ್ಗೆ ಫಲಾನುಭವಿಗಳಿಂದ ನೇರ ಪ್ರತಿಕ್ರಿಯೆ ಪಡೆಯುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಜೂನ್ 27 ರಂದು ಮೈಸೂರಿನಲ್ಲಿ "ಜನ–ಮನ : ಫಲಾನುಭವಿಗಳೊಂದಿಗೆ ಮುಖ್ಯಮಂತ್ರಿ ಸಂವಾದ" ಕಾರ್ಯಕ್ರಮವನ್ನು ಆಯೋಜಿಸಿದೆ.

ವಿವಿಧ ಇಲಾಖೆಗಳ ಯೋಜನೆಗಳ ಪ್ರಯೋಜನ ಪಡೆದಿರುವ 300 ಕ್ಕೂ ಹೆಚ್ಚು ಫಲಾನುಭವಿಗಳು ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಮೈಸೂರಿಗೆ ಆಗಮಿಸಲಿದ್ದು, ಮುಖ್ಯಮಂತ್ರಿಗಳು ಅಂದು ನೇರವಾಗಿ ಅವರೊಂದಿಗೆ ಸಂವಾದ ನಡೆಸುವರು.

ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆಗಳ ಲಾಭ ದೊರೆಯಬೇಕು ಎನ್ನುವುದು ಸರ್ಕಾರದ ಸದುದ್ದೇಶ. ಇಂತಹ ಜನಪರ ಕಾಳಜಿಯಿಂದಾಗಿ ಇಂದು ರಾಜ್ಯದಲ್ಲಿ ಸರಿಸುಮಾರು 4.5 ಕೋಟಿಗೂ ಹೆಚ್ಚು ಜನರು ಸರ್ಕಾರದಿಂದ ಒಂದಲ್ಲ ಒಂದು ರೀತಿಯಲ್ಲಿ ಪ್ರಯೋಜನ ಪಡೆದುಕೊಂಡಿದ್ದಾರೆ. ಒಟ್ಟು ಜನಸಂಖ್ಯೆಯ ಪೈಕಿ ಶೇ. 75 ಕ್ಕೂ ಹೆಚ್ಚು ಜನರು ಸರ್ಕಾರದ ವಿವಿಧ ಯೋಜನೆಗಳ ಫಲಾನುಭವಿಗಳಾಗಿದ್ದಾರೆ.

ಸರ್ಕಾರವೇ ರೂಪುಗೊಳಿಸಿ, ಅನುಷ್ಠಾನಗೊಳಿಸಿದ ಈ ಯೋಜನೆಗಳು ಸಮಾಜದ ಎಲ್ಲಾ ವರ್ಗದ ಜನರನ್ನು ನಿರೀಕ್ಷೆಯಂತೆ ತಲುಪುತ್ತಿವೆಯೇ? ಸರ್ಕಾರದ ಮೂಲ ಉದ್ದೇಶ ಈಡೇರಿದೆಯೇ?. ಇವುಗಳನ್ನು ಇನ್ನಷ್ಟು ಜನರಿಗೆ ಹೇಗೆ ತಲುಪಿಸಬಹುದು? ಮತ್ತಷ್ಟು ಪರಿಣಾಮಕಾರಿಯಾಗಿ ಹೇಗೆ ಮಾಡಬಹುದು? ಹೀಗೆ ಒಂದು ಯೋಜನೆಯನ್ನು ಜಾರಿಗೊಳಿಸಿದ ಬಳಿಕ ಅನೇಕ ಪ್ರಶ್ನೆಗಳು ಮೂಡುತ್ತವೆ. ಇವುಗಳಿಗೆ ಉತ್ತರವನ್ನು ಫಲಾನುಭವಿಗಳಿಂದಲೇ ನೇರವಾಗಿ ಕೇಳಿ ತಿಳಿದುಕೊಳ್ಳುವ ಪ್ರಯತ್ನವನ್ನು ಸರ್ಕಾರ ಮಾಡುತ್ತಿದೆ.

ಈ ಹಿನ್ನೆಲೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಇದೇ ಜೂನ್ 27 ರಂದು ಮೈಸೂರಿನ ಮಾನಸಗಂಗೋತ್ರಿಯ ಸೆನೆಟ್ ಭವನದ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ ಬೆಳಿಗ್ಗೆ 11.00 ಗಂಟೆಯಿಂದ ಮುಖ್ಯಮಂತ್ರಿಗಳೇ ಫಲಾನುಭವಿಗಳೊಂದಿಗೆ ನೇರವಾಗಿ ಸಂವಾದ ನಡೆಸುವ ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಸಂವಾದದಲ್ಲಿ ರಾಜ್ಯದ 30 ಜಿಲ್ಲೆಗಳಿಂದಲೂ ಫಲಾನುಭವಿಗಳು ಆಗಮಿಸಲಿದ್ದಾರೆ. ಇವರುಗಳು ತಮ್ಮ ಅನಿಸಿಕೆಗಳನ್ನು ನೇರವಾಗಿ ಮತ್ತು ಮುಕ್ತವಾಗಿ ಮುಖ್ಯಮಂತ್ರಿಗಳೊಂದಿಗೆ ಹಂಚಿಕೊಳ್ಳಲಿದ್ದಾರೆ.

ಈ ಸಮಾರಂಭದಲ್ಲಿ ರಾಜ್ಯ ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಖಾತೆ ಸಚಿವ ಆರ್. ರೋಷನ್ ಬೇಗ್ ಅವರು ಆಶಯ ನುಡಿಗಳನ್ನು ಆಡಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಶಾಸಕ ವಾಸು ಅವರು ವಹಿಸುವರು.

ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಕಂದಾಯ ಸಚಿವ ವಿ. ಶ್ರೀನಿವಾಸಪ್ರಸಾದ್, ಲೋಕೋಪಯೋಗಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಸಹಕಾರ ಸಚಿವ ಹೆಚ್.ಎಸ್. ಮಹದೇವಪ್ರಸಾದ್, ಜಿಲ್ಲೆಯ ಸಂಸತ್ ಸದಸ್ಯರು, ಜಿಲ್ಲಾ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಮೈಸೂರು ಮಹಾನಗರ ಪಾಲಿಕೆಯ ಮಹಾಪೌರರು ಹಾಗೂ ಉಪ ಮಹಾಪೌರರು, ಜಿಲ್ಲೆಯ ಎಲ್ಲಾ ಶಾಸಕರುಗಳು ಹಾಗೂ ಇತರೆ ಗಣ್ಯವ್ಯಕ್ತಿಗಳು ಪಾಲ್ಗೊಳ್ಳುವರು.

ಪಲ್ಲವಿ:ಹೆಚ್‌ಬಿಡಿ:ಎಸ್‌ವಿಎಲ್:ಬಾಬು:ಜಿಪಿಆರ್.